# Bangalore
# Regional News
# 13.02.2025 / 2.30 p.m.
# ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ರಾಜ್ಯದಲ್ಲಿ ವೋಲ್ವೊ ಕಂಪನಿ 1 ಸಾವಿರದ 400 ಕೋಟಿ ರೂಪಾಯಿ ಬಂಡವಾಳ ಹೂಡಿಕೆ – ಹೊಸಕೋಟೆ ಘಟಕ ವಿಸ್ತರಿಸಲು ನಿರ್ಧಾರ
2. ಮೆಟ್ರೋ ದರ ಪರಿಷ್ಕರಣೆ ಮಾಡುವಂತೆ ಬಿಎಂಆರ್‌ಸಿಎಲ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ದೇಶನ
3. ಏರೋ ಇಂಡಿಯಾ ವೈಮಾನಿಕ ಪ್ರದರ್ಶನ – ಸ್ವದೇಶಿ ನಿರ್ಮಿತ ಹೆಚ್.ಟಿ.ಟಿ.–40 ವಿಮಾನ ಚಾಲನೆ ಮಾಡಿದ ಸಂಸದ ತೇಜಸ್ವಿ ಸೂರ್ಯ
4. ಜಾನಪದ ಗಾಯಕಿ ಸುಕ್ರಿ ಬೊಮ್ಮಗೌಡ ವಿಧಿವಶ ; ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಸಂತಾಪ
5. ಇಂದು ವಿಶ್ವ ರೇಡಿಯೋ ದಿನ ; ಬಾನುಲಿ ಜನರ ಕಾಲಾತೀತ ಜೀವನಾಡಿ ಎಂದು ಪ್ರಧಾನಿ ಸಂದೇಶ

****************

ಬಸ್ ಮತ್ತು ಟ್ರಕ್ ತಯಾರಿಕೆಗೆ ಹೆಸರಾಗಿರುವ ಸ್ವೀಡನ್ ಮೂಲದ ವೋಲ್ವೊ ಕಂಪನಿಯು ಹೊಸಕೋಟೆಯಲ್ಲಿರುವ ತನ್ನ ತಯಾರಿಕಾ ಸ್ಥಾವರ ವಿಸ್ತರಿಸಲು ತೀರ್ಮಾನಿಸಿದ್ದು, 1 ಸಾವಿರದ 400 ಕೋಟಿ ರೂಪಾಯಿ ಬಂಡವಾಳ ಹೂಡಿಕೆ ಮಾಡುವುದಾಗಿ ಘೋಷಿಸಿದೆ. ಬೆಂಗಳೂರಿನಲ್ಲಿ ನಡೆಯುತ್ತಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದ ಭಾಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮುಖದಲ್ಲಿ ಇಂದು ಒಡಂಬಡಿಕೆಗೆ ಸಹಿ ಹಾಕಲಾಗಿದೆ. ಸರಕಾರದ ಪರವಾಗಿ ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಮತ್ತು ವೋಲ್ವೊ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಕಮಲ್ ಬಾಲಿ ಸಹಿ ಹಾಕಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, 'ವೋಲ್ವೋ ಕಂಪನಿಯು 25 ವರ್ಷಗಳ ಹಿಂದೆಯೇ ರಾಜ್ಯದಲ್ಲಿ ಬಂಡವಾಳ ಹೂಡಿ, ಬದಲಾವಣೆಗೆ ನಾಂದಿ ಹಾಡಿತು. ಈಗ ವೋಲ್ವೊ ಎನ್ನುವುದು ಉತ್ಕೃಷ್ಟ ಗುಣಮಟ್ಟದ ಬಸ್ಸುಗಳಿಗೆ ಇನ್ನೊಂದು ಹೆಸರಾಗಿದೆ. ರಾಜ್ಯ ಸಾರಿಗೆ ನಿಗಮದ ಐಷಾರಾಮಿ ಬಸ್ಸುಗಳನ್ನು ಕೂಡ ಜನ ಇದೇ ಹೆಸರಿನಿಂದ ಕರೆಯುತ್ತಿದ್ದಾರೆ. ವೋಲ್ವೊ ಕಂಪನಿಗೆ ಸರಕಾರ ಅಗತ್ಯ ಸೌಲಭ್ಯ ಮತ್ತು ನೆರವು ಒದಗಿಸಲಿದೆ. ಕಂಪನಿಯು ತನ್ನಲ್ಲಿ ಹೆಚ್ಚಿನ ಕನ್ನಡಿಗರಿಗೆ ಕೆಲಸ ನೀಡಬೇಕು ಎಂದು ತಿಳಿಸಿದ್ದಾರೆ.

ವೋಲ್ವೊ ಸಿಇಒ ಮಾರ್ಟಿನ್ ಲುಂಡ್ಸ್ಟೆಡ್ ಮಾತನಾಡಿ, ಹೊಸಕೋಟೆ ಸ್ಥಾವರದ ವಿಸ್ತರಣೆಯಿಂದ ವರ್ಷಕ್ಕೆ 20 ಸಾವಿರ ಬಸ್ ಹಾಗೂ ಟ್ರಕ್ ತಯಾರಿಸಬಹುದು. ಈ ಸಾಮರ್ಥ್ಯ ವೃದ್ಧಿಯಿಂದ ಉದ್ಯೋಗಸೃಷ್ಟಿಯೂ ಆಗಲಿದ್ದು, ಜಾಗತಿಕ ಪೂರೈಕೆ ಸರಪಳಿಯಲ್ಲಿ ಭಾರತ ಮತ್ತು ಕರ್ನಾಟಕದ ಸ್ಥಾನ ಮತ್ತಷ್ಟು ಸುಭದ್ರವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

*****************

ಬೆಂಗಳೂರು ಮೆಟ್ರೊ ರೈಲು ನಿಗಮ ಇತ್ತೀಚೆಗೆ ಪರಿಷ್ಕರಿಸಿರುವ ಪ್ರಯಾಣ ದರ ಏರಿಕೆ ವಿಚಾರದಲ್ಲಿ, ಹಲವು ಗೊಂದಲಗಳು ಮೂಡಿದ್ದು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಕೆಲವು ಕಡೆಗಳಲ್ಲಿ ಪ್ರಯಾಣ ದರ ದುಪ್ಪಟ್ಟಾಗಿರುವುದನ್ನು ಗಮನಿಸಲಾಗಿದೆ. ಇದರ ವಿರುದ್ಧ ವ್ಯಕ್ತವಾದ ಸಾರ್ವಜನಿಕರ ವಿರೋಧವನ್ನು ಪರಿಗಣಿಸಿ, ಅಸಹಜ ರೀತಿಯಲ್ಲಿ ದರ ಏರಿಕೆಯಾಗಿರುವ ಕಡೆಗಳಲ್ಲಿ, ಪ್ರಯಾಣ ದರ ಇಳಿಸುವಂತೆ ಬಿಎಂಆರ್‌ಸಿ ವ್ಯವಸ್ಥಾಪಕ ನಿರ್ದೇಶಕರಿಗೆ ತಿಳಿಸಲಾಗಿದೆ ಎಂದಿದ್ದಾರೆ.

ಮೆಟ್ರೊ ರೈಲು ವ್ಯವಸ್ಥೆ, ದೊಡ್ಡ ಪ್ರಮಾಣದಲ್ಲಿ ಬಂಡವಾಳ ಹೂಡಿಕೆ ಮಾಡಬೇಕಾಗಿರುವ ಸಾರ್ವಜನಿಕ ಸಾರಿಗೆ ವ್ಯವಸ್ಥೆಯಾಗಿದೆ. ಹೀಗಾಗಿ ಪ್ರಯಾಣ ದರ ಪರಿಷ್ಕರಣೆ ಅನಿವಾರ್ಯವಾಗಿತ್ತು. ಆದರೂ ಪ್ರಯಾಣಿಕರ ಹಿತರಕ್ಷಣೆ ಮಾಡಬೇಕಾಗಿರುವುದು ಸರ್ಕಾರದ ಕರ್ತವ್ಯ ಎನ್ನುವುದನ್ನು ಗಮನಕ್ಕೆ ತರಲಾಗಿದೆ ಎಂದು ತಿಳಿಸಿದ್ದಾರೆ.

ಇನ್ನೊಂದೆಡೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರತಿಕ್ರಿಯಿಸಿ, ಮೆಟ್ರೋ ದರ ಇಳಿಸಬೇಕು ಎಂಬುದು ಸರ್ಕಾರದ ಅಭಿಪ್ರಾಯವಾಗಿದ್ದು, ಅಂತಿಮ ತೀರ್ಮಾನ ಕೇಂದ್ರ ಸಮಿತಿಯದ್ದು ಎಂದು ತಿಳಿಸಿದ್ದಾರೆ.
ದರ ಇಳಿಕೆ ವಿಚಾರ ರಾಜ್ಯ ಸರ್ಕಾರದ ಸುಪರ್ದಿಗೆ ಬರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

****************

ಬೆಂಗಳೂರಿನಲ್ಲಿ ನಡೆಯುತ್ತಿರುವ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ಇಂದು ಸಾರ್ವಜನಿಕರಿಗೆ ಮುಕ್ತವಾಗಿದೆ. ಈ ನಡುವೆ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಸ್ವದೇಶಿ ನಿರ್ಮಿತ ಎಚ್‌ಟಿಟಿ-40 ತರಬೇತಿ ವಿಮಾನ ಚಾಲನೆ ಮಾಡಿ, ಗಮನ ಸೆಳೆದಿದ್ದಾರೆ.
ಬಳಿಕ ಮಾತನಾಡಿದ ತೇಜಸ್ವಿ ಸೂರ್ಯ, ಪೈಲಟ್ ತರಬೇತಿಗಾಗಿ ವಿದೇಶಿ ವಿಮಾನಗಳ ಅವಲಂಬನೆಯನ್ನು ದೂರವಾಗಿಸಿ, ಆತ್ಮನಿರ್ಭರ ಭಾರತಕ್ಕೆ ಇದು ಸಾಕ್ಷಿಯಾಗಿದೆ ಎಂದು ತಿಳಿಸಿದ್ದಾರೆ.
ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಭಾರತೀಯ ವಾಯುಪಡೆಗಾಗಿ ಅಭಿವೃದ್ಧಿಪಡಿಸಿದ ಈ ಎಚ್‌ಟಿಟಿ-40 ವಿಮಾನ, ನಾಲ್ಕು ಬ್ಲೇಡ್‌ಗಳ ಟರ್ಬೋ-ಪ್ರಾಪ್ ಇಂಜಿನ್‌ನಿಂದ ಚಾಲಿತವಾಗಿದೆ. ಜೊತೆಗೆ ಈ ವಿಮಾನ ಅತ್ಯಾಧುನಿಕ ಗಾಜಿನ ಕಾಕ್‌ಪಿಟ್ ಹೊಂದಿದೆ.

****************

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಸಚಿವ ಸಂಪುಟ ಉಪಸಮಿತಿಯು ರಾಜ್ಯದ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ ಕುರಿತು ವಿಧಾನಸೌಧದಲ್ಲಿ ಸಭೆ ನಡೆಸಿದೆ.
ಸಭೆಯಲ್ಲಿ ಸಚಿವರಾದ ಎಚ್.ಕೆ. ಪಾಟೀಲ್, ಎಚ್.ಸಿ. ಮಹದೇವಪ್ಪ, ಡಾ. ಶರಣ್ ಪ್ರಕಾಶ್ ಪಾಟೀಲ್, ಕೃಷ್ಣ ಬೈರೇಗೌಡ, ಡಾ. ಎಂ.ಸಿ. ಸುಧಾಕರ್ ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

****************

ಜನಪದ ಹಾಡುಗಳನ್ನು ಹಾಡುವ ಜೊತೆಗೆ ಮದ್ಯಪಾನ ವಿರೋಧಿ ಹೋರಾಟದಿಂದ ಖ್ಯಾತಿಗಳಿಸಿದ್ದ ಉತ್ತರಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನ ಬಡಗೇರಿಯ ಸುಕ್ರಿ ಬೊಮ್ಮ ಗೌಡ  ಗುರುವಾರ ನಸುಕಿನ ಜಾವ ತಮ್ಮ ಸ್ವಗೃಹದಲ್ಲಿ ನಿಧನರಾಗಿದ್ದಾರೆ.
88 ವರ್ಷ ವಯಸ್ಸಿನ ಸುಕ್ರಿ ಬೊಮ್ಮಗೌಡ ಕಳೆದ ಕೆಲವು ತಿಂಗಳುಗಳಿಂದ ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದರು. 1999ರಲ್ಲಿ ಜನಪದಶ್ರೀ ಪ್ರಶಸ್ತಿ, 2006ರಲ್ಲಿ ನಾಡೋಜ ಪ್ರಶಸ್ತಿ, 2017ರಲ್ಲಿ ಪದ್ಮಶ್ರೀ ಪ್ರಶಸ್ತಿಗೆ ಅವರು ಭಾಜನರಾಗಿದ್ದರು.
ಸುಕ್ರಜ್ಜಿ ಎಂದೇ ಖ್ಯಾತರಾಗಿದ್ದ ಅವರು ಹಾಲಕ್ಕಿ ಜನಪದ ಹಾಡುಗಳನ್ನು ಹಾಡುವ ಮೂಲಕ ಚಿರಪರಿಚಿತರಾಗಿದ್ದರು.
ಜಾನಪದ ಕೋಗಿಲೆ ಸುಕ್ರಿ ಬೊಮ್ಮಗೌಡ ನಿಧನದಿಂದ ಸಾಂಸ್ಕೃತಿಕ ಲೋಕಕ್ಕೆ ತುಂಬಲಾರದ ನಷ್ಟ ಎಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಕಂಬನಿ ಮಿಡಿದಿದ್ದಾರೆ. ಸುಕ್ರಿ ಬೊಮ್ಮಗೌಡ ಅವರನ್ನು ಕಳೆದುಕೊಂಡಿರುವ ಸಂಬಂಧಿಕರ ದು:ಖದಲ್ಲಿ ನಾನೂ ಪಾಲ್ಗೊಂಡಿದ್ದೇನೆ ಎಂದು ಮುಖ್ಯಮಂತ್ರಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.
ಸುಮಾರು 5 ಸಾವಿರಕ್ಕೂ ಹೆಚ್ಚು ಹಾಡುಗಳನ್ನು ತನ್ನ ನೆನಪಿನ ಬುತ್ತಿಯಲ್ಲಿ ಇಟ್ಟುಕೊಂಡಿದ್ದ ಮಹಾನ್ ಕಲಾವಿದೆ ಸುಕ್ರಿ ಬೊಮ್ಮನಗೌಡ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಇವರ ಅಗಲಿಕೆ ಸಾಂಸ್ಕೃತಿಕ ಲೋಕಕ್ಕೆ ತುಂಬಲಾರದ ನಷ್ಟ ಎಂದು ತಿಳಿಸಿದ್ದಾರೆ.
ಸುಕ್ರಿ ಬೊಮ್ಮ ಗೌಡ ಅವರ ನಿಧನಕ್ಕೆ ಉತ್ತರಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಸಂತಾಪ ವ್ಯಕ್ತಪಡಿಸಿದ್ದಾರೆ. ಮೃತರ ಆತ್ಮಕ್ಕೆ ಶಾಂತಿ ಕೋರಿ, ಕುಟುಂಬ ವರ್ಗಕ್ಕೆ ಹಾಗೂ ಅಭಿಮಾನಿಗಳಿಗೆ ದೇವರು ದುಃಖ ಭರಿಸುವ ಶಕ್ತಿ ನೀಡಲಿ ಎಂದು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.
ಪದ್ಮಶ್ರೀ ಪುರಸ್ಕೃತೆ ಸುಕ್ರಿ ಬೊಮ್ಮ ಗೌಡ ನಿಧನಕ್ಕೆ ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸಂತಾಪ ವ್ಯಕ್ತಪಡಿಸಿದ್ದಾರೆ.

****************

ಇಂದು ವಿಶ್ವ ರೇಡಿಯೋ ದಿನ. ಪ್ರತಿ ವರ್ಷ ಫೆಬ್ರವರಿ 13 ರಂದು, ವಿಶ್ವ ರೇಡಿಯೊ ದಿನ ಆಚರಿಸಲಾಗುತ್ತದೆ. ರೇಡಿಯೊ ಮಾಹಿತಿ, ಮನೋರಂಜನೆ ಮತ್ತು ಶಿಕ್ಷಣ ನೀಡುವ ಪ್ರಮುಖ ಮಾಧ್ಯಮವಾಗಿದೆ.  ರೇಡಿಯೊ ಜನರ ಜೀವನವನ್ನು ಸ್ಪರ್ಶಿಸುವ ಮತ್ತು ಜಗತ್ತಿನ ಮೂಲೆ ಮೂಲೆಯಿಂದ ಶೋತೃಗಳನ್ನು ಒಟ್ಟುಗೂಡಿಸುವ ವಿಶಿಷ್ಟ ಶಕ್ತಿ ಹೊಂದಿದೆ. ಈ ವರ್ಷದ ವಿಶ್ವ ರೇಡಿಯೋ ದಿನದ ವಿಷಯ – ರೇಡಿಯೋ ಮತ್ತು ಹವಾಮಾನ ಬದಲಾವಣೆ ಎಂಬುದಾಗಿದೆ.

ಪ್ರಧಾನಿ ನರೇಂದ್ರ ಮೋದಿ, ದೇಶದ ಜನತೆಗೆ ರೇಡಿಯೋ ದಿನದ ಶುಭಾಶಯ ಕೋರಿದ್ದಾರೆ. ರೇಡಿಯೋ ಹಲವಾರು ಜನರಿಗೆ ಕಾಲಾತೀತ ಜೀವನಾಡಿಯಾಗಿದೆ ಎಂದು ತಿಳಿಸಿದ್ದಾರೆ. ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್, ಸುದ್ದಿ ಮತ್ತು ಮಾಹಿತಿಯ ಪ್ರಸರಣದ ಮೂಲಕ, ರಾಷ್ಟ್ರದ ಸಾಂಸ್ಕೃತಿಕ ಮತ್ತು ಆರ್ಥಿಕ ಅಭಿವೃದ್ಧಿಯಲ್ಲಿ ರೇಡಿಯೋ ಪ್ರಮುಖ ಪಾತ್ರ ವಹಿಸುತ್ತದೆ.

'ಬಹುಜನ ಹಿತಾಯ ಬಹುಜನ ಸುಖಾಯ' ಎಂಬ ಧ್ಯೇಯವಾಕ್ಯದೊಂದಿಗೆ, ವಿಶ್ವದ ಅತಿದೊಡ್ಡ ರೇಡಿಯೋ ಜಾಲವಾದ ಆಕಾಶವಾಣಿ ದೇಶದ ಜನರ ಮನಸ್ಸನ್ನು ತಲುಪುತ್ತಿದೆ ಎಂದು ಅವರು ಹೇಳಿದರು. ಪ್ರಸಾರ ಭಾರತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗೌರವ್ ದ್ವಿವೇದಿ ತಮ್ಮ ಸಂದೇಶದಲ್ಲಿ, ಆಕಾಶವಾಣಿ ಭಾರತದ ಶ್ರೀಮಂತ ಸಂಸ್ಕೃತಿ ಮತ್ತು ಸಂಪ್ರದಾಯಗಳ ವಾಹಕವಾಗಿದೆ. ಇದು ಭಾರತದ ವೈಜ್ಞಾನಿಕ ಪ್ರಗತಿಯ ಪ್ರಯಾಣದೊಂದಿಗೆ ಜನರನ್ನು ಸಂಪರ್ಕಿಸುತ್ತಿದೆ ಎಂದು ಹೇಳಿದರು.

****************

ಧಾರವಾಡದ ಜಿಲ್ಲಾಧಿಕಾರಿ ದಿವ್ಯ ಪ್ರಭು, ಅಳ್ನಾವರ ತಾಲೂಕಿನ ಅಂಬೊಳಿ ಅಂಗನವಾಡಿ ಕೇಂದ್ರಕ್ಕೇ ಭೇಟಿ ನೀಡಿ, ಪರಿಶೀಲಿಸಿದರು.
ಬಳಿಕ ಬೆಣಚಿ ಗ್ರಾಮದ ಸರಕಾರಿ ಪ್ರೌಢಶಾಲೆಗೆ ಭೇಟಿ ನೀಡಿ, ಕಲಿಕೆಯಲ್ಲಿ ಹಿಂದುಳಿದ 10 ನೇ ತರಗತಿ ವಿದ್ಯಾರ್ಥಿಗಳು, ಎಸ್.ಡಿ.ಎಂ.ಸಿ ಸದಸ್ಯರು ಮತ್ತು ಗ್ರಾಮಸ್ಥರೊಂದಿಗೆ ಶೈಕ್ಷಣಿಕ ಮತ್ತು 10 ನೇ ತರಗತಿ ಫಲಿತಾಂಶ ಸುಧಾರಣೆ ಕುರಿತು ಚರ್ಚೆ ನಡೆಸಿದರು.
ವಿದ್ಯಾರ್ಥಿಗಳಿಗೆ ಮನೆಯಲ್ಲಿ ಓದುವ ವಾತಾವರಣ, ಮಾರ್ಗದರ್ಶನ ಮತ್ತು ಸಹಕಾರ ನೀಡುವಂತೆ ಮನವಿ ಮಾಡಿದರು.

****************

ಸರ್ಕಾರಿ ಆಡಳಿತ ವ್ಯವಸ್ಥೆ ಪರಿಶೀಲನೆಗಾಗಿ ಹಾವೇರಿ ಜಿಲ್ಲೆಗೆ ಭೇಟಿ ನೀಡಿರುವ ಉಪಲೋಕಾಯುಕ್ತ ಬಿ. ವೀರಪ್ಪ, ಹಾವೇರಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಚೇರಿಯಲ್ಲಿ ದಾಖಲೆ ಪರಿಶೀಲಿಸಿದರು.
'ದೃಢತೆ ಪ್ರಮಾಣ ಪತ್ರ ಇಲ್ಲದ ವಾಹನಗಳನ್ನು ಜಪ್ತಿ ಮಾಡಬೇಕು. ವಿಮೆ ಹಾಗೂ ಪರವಾನಗಿ ಇಲ್ಲದೇ ಶಾಲಾ ಬಸ್‌ಗಳು ಸಂಚರಿಸುತ್ತಿದ್ದು, ಈ ಬಗ್ಗೆ ಪರಿಶೀಲಿಸಿ ಕ್ರಮ ಜರುಗಿಸಬೇಕು' ಎಂದು ಸೂಚಿಸಿದ್ದಾರೆ. ಕಚೇರಿಯಲ್ಲಿ ಕಂಡುಬಂದ ಲೋಪಗಳ ಬಗ್ಗೆ ಪ್ರಾದೇಶಿಕ ಸಾರಿಗೆ ಅಧಿಕಾರಿ ಸೇರಿ ನಾಲ್ವರು ಸಿಬ್ಬಂದಿಗೆ ನೋಟಿಸ್ ಜಾರಿ ಮಾಡಿದ್ದಾರೆ.

****************

<u>ಸಂಕ್ಷಿಪ್ತ ಸುದ್ದಿಗಳು</u>

1. ಕಾರ್ಮಿಕ ಕಲ್ಯಾಣ ಮಂಡಳಿಯ ಯೋಜನೆಗಳ ಕುರಿತು ಕಾರ್ಮಿಕರಿಗೆ ಜಾಗೃತಿ ಮೂಡಿಸುವ ಎಲ್‌ಇಡಿ ಪ್ರಚಾರ ವಾಹನಕ್ಕೆ ಗದಗದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಚಾಲನೆ ನೀಡಿದರು.
2. ಯಾದಗಿರಿ ಜಿಲ್ಲೆಯ ಸುರಪುರ ನಗರದ ಸರ್ಕಾರಿ ಆಸ್ಪತ್ರೆಯಲ್ಲಿ ನಾಳೆ ಮತ್ತು ನಾಡಿದ್ದು ನೇತ್ರ ತಪಾಸಣೆ ಮತ್ತು ಚಿಕಿತ್ಸಾ ಶಿಬಿರವನ್ನು ಉಚಿತವಾಗಿ ಹಮ್ಮಿಕೊಳ್ಳಲಾಗಿದೆ ಎಂದು ಸುರಪುರ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಆರ್.ವಿ.ನಾಯಕ್ ತಿಳಿಸಿದ್ದಾರೆ.

********ಮುಕ್ತಾಯ********